**Bangalore**
**Regional News**
**09.04.2025 / 6.40 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ರಾಜ್ಯ ಸಾರಿಗೆ ಸಂಸ್ಥೆಗೆ ಎರಡು ಸಾವಿರ ಹೊಸ ಬಸ್ ಖರೀದಿಸಲು ಸರ್ಕಾರ ನಿರ್ಧಾರ
2. ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ರೈಲ್ವೆ ಕಾಮಗಾರಿಗೆ ಶೀಘ್ರವೇ ಚಾಲನೆ - ಕೇಂದ್ರ ಸಚಿವ ವಿ.ಸೋಮಣ್ಣ
3. ಕೋವಿಡ್ ಖರೀದಿ ಅಕ್ರಮಗಳ ತನಿಖಾ ಸಮಿತಿ ಅವಧಿ ಜುಲೈ ೩೧ರವರೆಗೆ ವಿಸ್ತರಿಸಿ ಸರ್ಕಾರ ಆದೇಶ
4. ಬೆಲೆ ಏರಿಕೆ ವಿರುದ್ಧ ರಾಜ್ಯಾದ್ಯಂತ ಜೆಡಿಎಸ್ ಅಭಿಯಾನ
5. ಬೆಂಗಳೂರು ಸೇರಿದಂತೆ ಕರಾವಳಿ ಜಿಲ್ಲೆಗಳಲ್ಲಿ ಇಂದು ಗುಡುಗು ಸಹಿತ ಮಳೆ - ಹವಾಮಾನ ಇಲಾಖೆ ಮುನ್ಸೂಚನೆ

<><><><>

ರಾಜ್ಯ ಸಾರಿಗೆ ಸಂಸ್ಥೆ ಜನದಟ್ಟಣೆ ನಿವಾರಿಸಲು ಹೊಸದಾಗಿ ಎರಡು ಸಾವಿರ ಬಸ್‌ಗಳನ್ನು ಖರೀದಿಸಲಾಗುತ್ತಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲ್ಲೂಕಿನ ಮಾಧ್ವಾರ್ ಗ್ರಾಮದಲ್ಲಿ ಬಸ್ ನಿಲ್ದಾಣ ಉದ್ಘಾಟಿಸಿ ಮಾತನಾಡಿದ ಅವರು, ಶಕ್ತಿ ಯೋಜನೆಯಿಂದಾಗಿ ಬಸ್‌ಗಳಲ್ಲಿ ಮಹಿಳೆಯರ ಸಂಚಾರ ಹೆಚ್ಚಾಗಿದೆ. ಸಾರ್ವಜನಿಕರ ಜನದಟ್ಟಣೆಯು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಶೀಘ್ರದಲ್ಲಿಯೇ ಹೊಸದಾಗಿ ಎರಡು ಸಾವಿರ ಬಸ್‌ಗಳನ್ನು ಖರೀದಿಸಲಾಗುತ್ತಿದ್ದು, ಕಲ್ಯಾಣ ಕರ್ನಾಟಕ ಭಾಗಕ್ಕೆ ಸುಮಾರು ೬೦೦ ರಿಂದ ೭೦೦ ಬಸ್‌ಗಳನ್ನು ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.
ಧ್ವನಿ: ರಾಮಲಿಂಗಾರೆಡ್ಡಿ

<><><><>

ಕರ್ನಾಟಕದಲ್ಲಿ ಹೊಸ ರೈಲ್ವೆ ಯುಗ ಆರಂಭವಾಗಿದ್ದು, ನೆನೆಗುದಿಗೆ ಬಿದ್ದಿದ್ದ ರೈಲ್ವೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ತುಮಕೂರಿನಲ್ಲಿ ರೈಲ್ವೆ ಮೇಲ್ಸುತುವೆ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ಅವರು, ಇದೇ ೧೨ ರಿಂದ ಬೆಂಗಳೂರಿನಿಂದ ಕುಕ್ಕೆ ಸುಬ್ರಹ್ಮಣ್ಯಕ್ಕೆ ಹೊಸ ರೈಲು ಸಂಚರಿಸಲಿದೆ

ಎಂದು ಘೋಷಿಸಿದ್ದಾರೆ. ಬೆಂಗಳೂರಿನಿಂದ ಕುಕ್ಕೆ ಸುಬ್ರಹ್ಮಣ್ಯಕ್ಕೆ ಈ ರೈಲು ಪ್ರತಿ ದಿನ ನಾಲ್ಕು ಬಾರಿ ಸಂಚರಿಸಲಿದೆ.

<><><>

ಕೋವಿಡ್ ಖರೀದಿ ಅಕ್ರಮಗಳ ತನಿಖಾ ಸಮಿತಿ ಅವಧಿ ಜುಲೈ ೩೧ರವರೆಗೆ ವಿಸ್ತರಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ನಿವೃತ್ತ ನ್ಯಾಯಾಧೀಶರಾದ ಜಾನ್ ಮೈಕೆಲ್ ಡಿ ಕುನ್ಹಾ ನೇತೃತ್ವದ ವಿಚಾರಣಾ ಆಯೋಗ ಹಗರಣಗಳ ತನಿಖೆ ನಡೆಸುತ್ತಿದೆ. ಸರ್ಕಾರದ ಅಧೀನ ಕಾರ್ಯದರ್ಶಿ ನಾಗರಾಜು ಎಸ್ ಆಯೋಗದ ಅವಧಿ ವಿಸ್ತರಿಸಿ ಆದೇಶ ಹೊರಡಿಸಿದ್ದಾರೆ. ಚಾಮರಾಜನಗರದ ಜಿಲ್ಲಾ ಆಸ್ಪತ್ರೆಯಲ್ಲಿ ಆಮ್ಲಜನಕ ಲಭ್ಯವಿಲ್ಲದ ಹಿನ್ನೆಲೆಯಲ್ಲಿ ಸಾವನ್ನಪ್ಪಿದ ಘಟನೆಯ ತನಿಖೆಗೆ ಸಂಬಂಧಿಸಿದಂತೆ ಆಯೋಗದ ಅವಧಿಯನ್ನು ವಿಸ್ತರಿಸಲಾಗಿದೆ ಎಂದು ಆಯೋಗದಲ್ಲಿ ಉಲ್ಲೇಖಿಸಲಾಗಿದೆ.

<><><>

ರಾಜ್ಯ ಸರ್ಕಾರದ ದರ ಏರಿಕೆ ಭ್ರಷ್ಟಾಚಾರದ ವಿರುದ್ಧ ಜೆಡಿಎಸ್ ಪಕ್ಷ ವಿನೂತನ ಅಭಿಯಾನ ಆರಂಭಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಯುವ ಜನತಾ ದಳ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಸಾಕಪ್ಪ ಸಾಕು ಕಾಂಗ್ರೆಸ್ ಸರ್ಕಾರ ಎಂಬ ಅಭಿಯಾನ ಆರಂಭಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ಬೆಲೆ ಏರಿಕೆ ವಿರುದ್ಧ ಜನ ರೋಸಿ ಹೋಗಿದ್ದು, ಇದೇ ಶನಿವಾರ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ, ಬಿಜೆಪಿ, ಜೆಡಿಎಸ್ ನಡುವೆ ಯಾವುದೇ ಭಿನ್ನಾಭಿಪ್ರಾಯ ಇಲ್ಲ ಎಂದು ಸ್ಪಷ್ಟಪಡಿದ್ದಾರೆ.

<><><>

ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಹಾಗೂ ವೇವ್‌ಲ್ಯಾಪ್ಸ್ ಸಂಸ್ಥೆಯ ಸಹಯೋಗದೊಂದಿಗೆ ಆಯೋಜಿಸುತ್ತಿರುವ ಎಕ್ಸ್‌ಆರ್ ಕ್ರಿಯೇಟರ್ ಹ್ಯಾಕಥಾನ್, ಮೌಲ್ಯಮಾಪನದ ಅಂತಿಮ ಹಂತ ತಲುಪಿದ್ದು, ವಿಜೇತರಿಗೆ ಇಂದು ಬಹುಮಾನ ವಿತರಣೆ ನಡೆಯಿತು. ಈ ಹ್ಯಾಕಥಾನ್ ಮುಂದಿನ ತಿಂಗಳ ೧ ರಿಂದ ೪ ರವರೆಗೆ ಮುಂಬೈನಲ್ಲಿ ನಡೆಯಲಿರುವ ವಿಶ್ವ ದೃಶ್ಯ-ಶ್ರವಣ ಮತ್ತು ಮನರಂಜನಾ ಶೃಂಗಸಭೆ- ವೇವ್ಸ್ ನ ಒಂದು ಭಾಗವಾಗಿದೆ. ಈ ನಡುವೆ, ಸ್ಲೋವಾಕಿಯಾ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ವೇವ್ಸ್ ಶೃಂಗಸಭೆಯಲ್ಲಿ ಭಾಗವಹಿಸುವಂತೆ ಸ್ಲೋವಾಕಿಯಾ ಅಧ್ಯಕ್ಷರಿಗೆ ಆಹ್ವಾನ ನೀಡಿದ್ದಾರೆ.

<><><>

ಭ್ರಷ್ಟಾಚಾರದಲ್ಲಿ ಕರ್ನಾಟಕಕ್ಕೆ ಅಗ್ರಸ್ಥಾನ ಎಂಬುದಾಗಿ ತಾವು ಹೇಳಿಕೆ ನೀಡಿಲ್ಲ ಎಂದು ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ, ಶಾಸಕ ಬಸವರಾಜ ರಾಯರೆಡ್ಡಿ ಸ್ಪಷ್ಟಪಡಿಸಿದ್ದಾರೆ. ಈ ಕುರಿತಂತೆ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮಾಧ್ಯಮಗಳಲ್ಲಿ ತಮ್ಮ ಹೇಳಿಕೆಯನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದು ತಿಳಿಸಿದ್ದಾರೆ. ಭ್ರಷ್ಟಾಚಾರಕ್ಕೆ ಆಸ್ಪದವಿಲ್ಲದಂತೆ ಉತ್ತಮ ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳಲು ಶಿಫಾರಸ್ಸು ಮಾಡಬೇಕೆಂದು ತಿಳಿಸಿರುವುದಾಗಿ ಸ್ಪಷ್ಟನೆ ನೀಡಿದ್ದಾರೆ.

<><><>

ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಯ ಹಾಡಿಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಯಾವುದೇ ಸಮಸ್ಯೆ ಉಂಟಾದರೂ ಸರ್ಕಾರದ ಮಟ್ಟದಲ್ಲಿ ಮಾತುಕತೆ ನಡೆಸಿ ಬಗೆಹರಿಸುವುದಾಗಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರೂ ಹಾಗೂ ಶಾಸಕ ರಮೇಶ್ ಬಂಡಿಸಿದ್ದೇಗೌಡ ತಿಳಿಸಿದ್ದಾರೆ. ಮೈಸೂರಿನಲ್ಲಿ ನಡೆದ ಚಾಮರಾಜನಗರ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಾಡಿಗಳಿಗೆ ವಿದ್ಯುತ್ ಪೂರೈಸಲು ಅಗತ್ಯವಿರುವ ಕೆಲಸವನ್ನು ಅಧಿಕಾರಿಗಳು ಕೂಡಲೇ ಆರಂಭಿಸಬೇಕು ಎಂದು ಸೂಚನೆ ನೀಡಿದ್ದಾರೆ. ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಮಾತನಾಡಿ, 'ಜಿಲ್ಲೆಯ ವ್ಯಾಪ್ತಿಯಲ್ಲಿರುವ ೩೧ ಹಾಡಿಗಳಿಗೆ ವಿದ್ಯುತ್ ಪೂರೈಕೆ ಮಾಡುವ ನಿಟ್ಟಿನಲ್ಲಿ ಸೆಸ್ಕ್ ವತಿಯಿಂದ ಉತ್ತಮ ಸಹಕಾರ ಸಿಕ್ಕಿದೆ ಎಂದು ಹೇಳಿದ್ದಾರೆ.

<><><>

ಮನ್ರೇಗಾ ಯೋಜನೆಯ ಕೂಲಿ ದರವನ್ನು ಏಪ್ರಿಲ್ ೧ ರಿಂದ ೩೭೦ ರೂಪಾಯಿಗೆ ಏರಿಕೆ ಮಾಡಲಾಗಿದ್ದು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ನರೇಗಾ ಯೋಜನೆಯಡಿ ದುಡಿಯುವ ಮೂಲಕ ಆರ್ಥಿಕವಾಗಿ ಸಬಲರಾಗಬೇಕು ಎಂದು ಸಹಾಯಕ ನಿರ್ದೇಶಕಿ ವಸಂತಲಕ್ಷ್ಮೀ ಕರೆ ನೀಡಿದ್ದಾರೆ. ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಆಯೋಜಿಸಿದ್ದ "ಸ್ತ್ರೀ ಚೇತನ ವಿಶೇಷ ಅಭಿಯಾನ" ಕಾರ್ಯಕ್ರಮಕ್ಕೆ ಜಾಬ್ ಕಾರ್ಡ್ ವಿತರಣೆ ಮಾಡಿ ಮಾತನಾಡಿದ ಅವರು, ಮನ್ರೇಗಾದಲ್ಲಿ ಶೇಕಡ ೫೦ ರಷ್ಟಿರುವ ಮಹಿಳಾ ಕೂಲಿ ಕಾರ್ಮಿಕರ ಸಂಖ್ಯೆಯನ್ನು ಶೇಕಡ ೭೦ಕ್ಕೆ ಹೆಚ್ಚಿಸುವುದು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಿದ್ದಾರೆ.

<><><>

ರಾಜ್ಯ ಕಂಡ ಶ್ರೇಷ್ಠ ಸಾಹಿತಿಗಳಲ್ಲಿ ಕೆ.ಎಸ್.ನರಸಿಂಹಸ್ವಾಮಿ ಒಬ್ಬರು. ಅವರು ಸಾಹಿತ್ಯ ಕ್ಷೇತ್ರಕ್ಕೆ ನೀಡಿದ ಕೊಡುಗೆಗಳನ್ನು ಶಾಶ್ವತವಾಗಿ ಉಳಿಸಿಕೊಳ್ಳಬೇಕಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ ಕುಮಾರ ಅಭಿಪ್ರಾಯಪಟ್ಟಿದ್ದಾರೆ. ಕೆ.ಎಸ್.ನರಸಿಂಹಸ್ವಾಮಿ ಸ್ಮಾರಕ ನಿರ್ಮಾಣದ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಈಗಾಗಲೇ ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ

ಸೂಚಿಸಿದ್ದಾರೆ ಎಂದು ತಿಳಿಸಿದ್ದಾರೆ. ಕೆ. ಎಸ್ ನರಸಿಂಹಸ್ವಾಮಿ ಅವರ ಮನೆ ಮಾರಾಟವಾಗಿದ್ದು, ಮನೆಯ ಮಾಲೀಕರು ಮನೆಯನ್ನು ಬಿಟ್ಟುಕೊಡಲು ತಯಾರಾಗಿದ್ದಾರೆ. ಮಾಲೀಕರಿಗೆ ಪರ್ಯಾಯ ಸರ್ಕಾರಿ ಜಾಗ ನೀಡಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹೆಸರಿಗೆ ನೋಂದಾಯಿಸಿಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಉತ್ತರ ಕನ್ನಡ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಮೋದಿತ ಗುರಿಯನ್ನು ಸಾಧಿಸಲು ಕ್ರಮವಹಿಸಬೇಕು ಎಂದು ಉತ್ತರ ಕನ್ನಡ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕೂಲಿಕಾರರ ಆರೋಗ್ಯ ಹಿತದೃಷ್ಟಿಯಿಂದ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಕೆಲಸದ ಪ್ರಮಾಣದಲ್ಲಿ ಶೇಕಡ ೩೦ ರಷ್ಟು ರಿಯಾಯಿತಿ ನೀಡಲಾಗಿದೆ. ಆದ್ದರಿಂದ ಕೂಲಿಕಾರರು ಬೇಸಿಗೆಯಲ್ಲಿ ವಲಸೆ ಹೋಗದೆ ಸ್ವಗ್ರಾಮದಲ್ಲಿಯೇ ಮನ್ರೇಗಾ ಯೋಜನೆಯಡಿ ಉದ್ಯೋಗ ಪಡೆಯುವಂತೆ ಕರೆ ನೀಡಿದ್ದಾರೆ.

<><><><>

ಕರಾವಳಿ ಕರ್ನಾಟಕದ ಹಲವೆಡೆ ಮಳೆಯಾಗಿದೆ. ಉತ್ತರ ಒಳನಾಡಿನ, ದಕ್ಷಿಣ ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ. ಕೊಡಗಿನಲ್ಲಿ ೩ ಸೆಂಟಿಮೀಟರ್, ಕುಮಟಾದಲ್ಲಿ ೨ ಸೆಂಟಿಮೀಟರ್ ಮಳೆಯಾಗಿದೆ. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಇಂದು ಒಂದೆರೆಡು ಕಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ. ಬೆಂಗಳೂರಿನಲ್ಲಿ ಭಾಗಶಃ ಮೋಡಕವಿದ ವಾತಾವರಣವಿರಲಿದ್ದು, ಗುಡುಗು ಸಹಿತ ಹಗುರ ಮಳೆಯಾಗುವ ಸಾಧ್ಯತೆ. ಕಲಬುರಗಿಯಲ್ಲಿ ಅತಿ ಹೆಚ್ಚು ಉಷ್ಣಾಂಶ ೪೦.೬ ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

<><><><>

ಪ್ರಾದೇಶಿಕ ಅಸಮತೋಲನ ರಾಜ್ಯದ ಆರ್ಥಿಕ ಪರಿಸ್ಥಿತಿಯ ಮೇಲೆ ಪರಿಣಾಮ ಬೀರಿದೆ ಎಂದು ವಿತ್ತೀಯ ಸುಧಾರಣೆ ಮತ್ತು ಯೋಜನಾ ಇಲಾಖೆಯ ಕಾರ್ಯದರ್ಶಿ ಡಾ. ವಿಶಾಲ್ ಆರ್ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಮಾತನಾಡಿದ ಅವರು, ಪ್ರಾದೇಶಿಕ ಅಸಮತೋಲನೆ ಹೋಗಲಾಡಿಸಲು ಸಂಘ ಸಂಸ್ಥಗಳು ಸರ್ಕಾರದೊಂದಿಗೆ ಗುರುತಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ. ಪ್ರಾದೇಶಿಕ ಅಸಮತೋಲನ ಹೋಗಲಾಡಿಸಲು ರಾಜ್ಯ ಸರ್ಕಾರವು ಆರ್ಥಿಕ ತಜ್ಞರಾದ ಪ್ರೊ. ಎಂ.ಗೋವಿಂದರಾವ್ ಅಧ್ಯಕ್ಷತೆಯಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ರಚಿಸಿದೆ ಎಂದು ಹೇಳಿದ್ದಾರೆ.

<><><><>

<u>ಸಂಕ್ಷಿಪ್ತ ಸುದ್ದಿಗಳು-೧</u>

1. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ನಾಳೆ ಚಿಕ್ಕಬಳ್ಳಾಪುರ ಜಿಲ್ಲಾ ಪ್ರವಾಸ ಕೈಗೊಂಡಿದ್ದು, ೫೦ ಹಾಸಿಗೆಗಳ ತೀವ್ರ ನಿಗಾ ಆರೈಕೆ ಘಟಕ ಕಟ್ಟಡ ನಿರ್ಮಾಣ ಕಾಮಗಾರಿಯ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

2. ವೃತ್ತಿಪರ ಕೋರ್ಸ್‌ಗಳ ಪ್ರವೇಶಕ್ಕಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಇದೇ ೧೬ ಮತ್ತು ೧೭ರಂದು ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಯಲಿದೆ. ಪರೀಕ್ಷೆಯನ್ನು ಸುಗಮವಾಗಿ ನಡೆಸುವಂತೆ ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

3. ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು ೩೩ ಕೋಟಿ ೨೦ ಲಕ್ಷ ತೆರಿಗೆ ವಸೂಲಾತಿ ಮಾಡಲಾಗಿದ್ದು ಆ ಮೂಲಕ ಚಿಕ್ಕಮಗಳೂರು ಜಿಲ್ಲೆಯು ತೆರಿಗೆ ಸಂಗ್ರಹದಲ್ಲಿ ರಾಜ್ಯಕ್ಕೆ ೩ನೇ ಸ್ಥಾನ ಪಡೆದುಕೊಂಡಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಚ್.ಎಸ್. ಕೀರ್ತನ ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>